# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1228(1507) |
| ಮಾನ್ಯ ಸದಸ್ಯರ ಹೆಸರು | ಶ್ರೀ ಗೋವಿಂದರಾಜು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 10.03.2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಟ್ಟಡ ಕಾರ್ಮಿಕರ ನೋಂದಣಿ ಮಾಡುವವರು ಯಾರು; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಲಾಗುತ್ತಿದೆ.<br>ಸದರಿ ಕಾರ್ಮಿಕರನ್ನು ಕ್ಷೇತ್ರಮಟ್ಟದಲ್ಲಿ ನೋಂದಾಯಿಸಲು ಕಾರ್ಮಿಕ ಇಲಾಖೆಯ ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳನ್ನು ನೋಂದಣಿ ಅಧಿಕಾರಿಗಳನ್ನಾಗಿ ಸರ್ಕಾರದ ವತಿಯಿಂದ ನೇಮಿಸಲಾಗಿದೆ. |
| ಆ) | ಕಟ್ಟಡ ಕಾರ್ಮಿಕರೆಂದು ತೀರ್ಮಾನಿಸಲು ಸರ್ಕಾರದಲ್ಲಿರುವ ಮಾನದಂಡವೇನು; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ರ ಕಲಂ.12 ರ ಪ್ರವಧಾನಗಳನ್ವಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕಳೆದ ವರ್ಷದಲ್ಲಿ 90 ದಿನಗಳಲ್ಲಿ ಕೆಲಸ ನಿರ್ವಹಿಸಿದ 18 ರಿಂದ 60 ವರ್ಷದೊಳಗಿನ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಣಿ ಮಾಡಲಾಗುತ್ತಿದೆ. |
| ಇ) | ಕಟ್ಟಡ ಕಾರ್ಮಿಕರೆಂದು ತಪ್ಪು ಮಾಹಿತಿ ನೀಡಿ, ಸರ್ಕಾರದ ಹಣವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳಾಗಿ ನೋಂದಣಿ ಮಾಡಲು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ರಡಿ ಅವಕಾಶ ಕಲ್ಪಿಸಲಾಗಿದ್ದು, ಸದರಿ ಕಾಯ್ದೆಯಲ್ಲಿ ನಿಗಧಿಪಡಿಸಿರುವ ಅರ್ಹತೆ ಮತ್ತು ಮಾನದಂಡಗಳನ್ವಯ ಸೇವಾ ಸಿಂಧು ತಂತ್ರಾಂಶದಲ್ಲಿ ಸಲ್ಲಿಸಲಾಗಿರುವ ಅರ್ಜಿ ಮತ್ತು ದಾಖಲೆಗಳನ್ನು ಪರಿಶೀಲಿಸಿ ನೋಂದಾಣಾಧಿಕಾರಿಗಳಾದ ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರು ನೋಂದಣಿ ಮಾಡುತ್ತಿದ್ದಾರೆ. ಅನರ್ಹ ಫಲಾನುಭವಿಗಳಿಗಾಗಿ ಅರ್ಜಿಗಳನ್ನು ಸಲ್ಲಿಸಿದಲ್ಲಿ ಅವರ ಅರ್ಜಿಯನ್ನು ಸೂಕ್ತ ಕಾರಣಗಳೊಂದಿಗೆ ತಿರಸ್ಕರಿಸಲಾಗುತ್ತಿದೆ. |
| ಈ) | ಬಂದಿದ್ದಲ್ಲಿ ನಿಜವಾದ ಕಟ್ಟಡ ಕಾರ್ಮಿಕನಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |

| | | |
|---|---|---|
| | | ಇದಲ್ಲದೇ, ನಕಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ನೋಂದಣಿಯಾಗುವುದನ್ನು ತಡೆಗಟ್ಟಲು, ನೋಂದಣಿಗಾಗಿ ಸ್ವೀಕೃತವಾದ ಅರ್ಜಿಗಳನ್ನು ವಿಲೇವಾರಿ ಮಾಡುವಾಗ ಪರಿಶೀಲನೆ ನಡೆಸಿ ಅವಶ್ಯವಿದ್ದಲ್ಲಿ ಸತ್ಯಾಸತ್ಯತೆಯನ್ನು ಖಾತರಿ ಪಡಿಸಿಕೊಳ್ಳಲು ಸ್ಥಳ ತಪಾಸಣೆ ಕೂಡ ನಡೆಸಿ, ನೋಂದಣಿಗೆ ಕ್ರಮವಹಿಸುವಂತೆ ಹಾಗೂ ನಕಲಿ ಅರ್ಜಿಗಳೆಂದು ಕಂಡು ಬಂದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವಂತೆ ಮಂಡಳಿಯಿಂದ ಈಗಾಗಲೇ ಸುತ್ತೋಲೆಯನ್ನು ಕ್ಷೇತ್ರ ಅಧಿಕಾರಿಗಳಿಗೆ ದಿನಾಂಕ: 04-10-2021 ರಂದು ಹೊರಡಿಸಲಾಗಿರುತ್ತದೆ.<br><br>ಇದಲ್ಲದೇ ಅಸಮರ್ಪಕ ದಾಖಲೆಗಳು ಹಾಗೂ ತಪ್ಪು ಮಾಹಿತಿಯನ್ನು ನೀಡಿ ನೋಂದಾಣಿಯಾಗುವ ಫಲಾನುಭವಿಗಳ ಸದಸ್ಯತ್ವನ್ನು ರದ್ದು ಪಡಿಸಲು ನೋಂದಾಣಿಧಿಕಾರಿಗಳಿಗೆ ಅಧಿಕಾರವನ್ನು ನೀಡಿ ಕರ್ನಾಟಕ ನಿಯಮಗಳಲ್ಲಿ ತಿದ್ದುಪಡಿಯನ್ನು ತರಲಾಗುತ್ತಿದೆ.<br><br>ಮುಂದುವರೆದು, ಜಿಲ್ಲಾ ಮಟ್ಟದಲ್ಲಿ ನೋಂದಣಿಗಳ ಮೇಲೆ ನಿಗವಹಿಸಲು ಹಿರಿಯ ಅಧಿಕಾರಿಗಳನ್ನೊಳಗೊಂಡ ತಂಡವನ್ನು ರಚಿಸಲು ಕ್ರಮ ವಹಿಸಲಾಗುತ್ತಿದೆ. |
| ಉ) | ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಿಶೇಷ ಯೋಜನೆ ರೂಪಿಸಲು ಸರ್ಕಾರ ಆಲೋಚಿಸಿದೆಯೇ; | ಮಂಡಳಿಯವತಿಯಿಂದ ನೋಂದಾಯಿತ ಫಲಾನುಭವಿಗಳ 2 ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಈ ಕೆಳಕಂಡ ಶೈಕ್ಷಣಿಕ ಸಹಾಯ ಧನ-ಸೌಲಭ್ಯದಡಿ ನರ್ಸರಿ ಯಿಂದ ಉನ್ನತ ಮಟ್ಟದ ಶಿಕ್ಷಣಕ್ಕಾಗಿ ಸಹಾಯ ಧನ ನೀಡಲಾಗುತ್ತಿದೆ, ವಿವರವನ್ನು **ಅನುಬಂಧದಲ್ಲಿ** ನೀಡಲಾಗಿದೆ.<br>ಅಲ್ಲದೇ, ಮಂಡಳಿಯ ಫಲಾನುಭವಿಗಳ ಮಕ್ಕಳು ಐಎಎಸ್/ ಕೆಎಎಸ್ ಹಾಗೂ ಸ್ಪರ್ದಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ಮಂಡಳಿಯ ವತಿಯಿಂದ ತರಬೇತಿ ನೀಡಲಾಗುತ್ತಿದೆ. |
| ಊ) | ಬೆಂಗಳೂರು ನಗರ ಹಾಗೂ ನೆರೆಯ ಜಿಲ್ಲೆಗಳಲ್ಲಿ ಕಟ್ಟಡ ಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಲ್ಲಿ ಹೆಚ್ಚಿನ ಭಾಗ ಹೊರ ರಾಜ್ಯದಿಂದ ಬಂದು ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೆಚ್ಚಿನ ಸಂಖ್ಯೆಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹೊರ ರಾಜ್ಯಗಳಿಂದ ಬಂದು ಕೆಲಸ ನಿರ್ವಹಿಸುತ್ತಿರುವುದು ಮಂಡಳಿಯ ಗಮನಕ್ಕೆ ಬಂದಿರುತ್ತದೆ. |
| ಋ) | ಬಂದಿದ್ದಲ್ಲಿ ಇವರಿಗೂ ಸಹ ಕಟ್ಟಡ ಕಾರ್ಮಿಕರಿಗೆ ನೀಡುವ ಎಲ್ಲಾ ಸವಲತ್ತುಗಳನ್ನು ನೀಡಲಾಗುತ್ತಿದೆಯೇ: | ಮಂಡಳಿಯು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ರೂಪಿಸಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಲಸೆ ಕಟ್ಟಡ ಕಾರ್ಮಿಕರೂ ಸಹ ಪಡೆಯಲು ಅರ್ಹರಿರುತ್ತಾರೆ. |

<table>
<tr>
<td>೩)</td>
<td>ಕಳೆದ 5 ವರ್ಷದಿಂದ ವಾರ್ಷಿಕವಾಗಿ ಕಟ್ಟಡ ಕಾರ್ಮಿಕ ನಿಧಿಗೆ ಬಂದಿರುವ ನಿಧಿ ಎಷ್ಟು;<br>(ವರ್ಷವಾರು ಮಾಹಿತಿ ನೀಡುವುದು)</td>
<td>ಮಂಡಳಿಗೆ ಕಳೆದ 5 ವರ್ಷಗಳಿಂದ ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ಶೆ. 1ರಷ್ಟು ಸುಂಕ ರೂಪದಲ್ಲಿ ರೂ. 3974.50 ಕೋಟಿ ಮೊತ್ತವು ಸಂಗ್ರಹವಾಗಿರುತ್ತದೆ. ವಾರ್ಷವಾರು ವಿವರ ಈ ಕೆಳಕಂಡಂತಿದೆ:
<table>
<tr><th>ವರ್ಷ</th><th>ಸಂಗ್ರವಾದ ಸುಂಕ ಮೊತ್ತ (ಕೋಟಿಗಳಲ್ಲಿ)</th></tr>
<tr><td>2016-17</td><td>709.25</td></tr>
<tr><td>2017-2018</td><td>769.93</td></tr>
<tr><td>2018-2019</td><td>868.53</td></tr>
<tr><td>2019-2020</td><td>902.30</td></tr>
<tr><td>2020-2021</td><td>724.49</td></tr>
<tr><td>ಒಟ್ಟು</td><td>3974.50</td></tr>
</table>
</td>
</tr>
</table>

ಕಾಇ 157 ಎಲ್ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಗೋವಿಂದರಾಜು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1228(1507)

ನೋಂದಾಯಿತ ಫಲಾನುಭವಿಗಳ 2 ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಈ ಕೆಳಕಂಡ ಶೈಕ್ಷಣಿಕ ಸಹಾಯ ಧನ ಸೌಲಭ್ಯದಡಿ ನರ್ಸರಿ ಯಿಂದ ಉನ್ನತ ಮಟ್ಟದ ಶಿಕ್ಷಣಕ್ಕಾಗಿ ಸಹಾಯ ಧನ ನೀಡಲಾಗುತ್ತಿದೆ:

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತುದ್ವಿತೀಯಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು |
| ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ | | |
| 12 | ಬಿಇ / ಬಿ.ಟೆಕ್‌ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ ಕೋರ್ಸ್ ನಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ್ ನಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್‌ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಪೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ |

| | | |
|---|---|---|
| | | ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ ಎಐಐಎಮ್ಎಸ್ /ಎನ್ಎಲ್ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |